1) ಶ್ರೀ ಕೆ.ಎಲ್. ತಿವಾರಿ, ಸದಸ್ಯ ಕಾರ್ಯದರ್ಶಿ
ಅಬಕಾರಿ ಅಧೀಕ್ಷಕರು, ಗುಲ್ಬರ್ಗಾ

2) ಶ್ರೀ ಕೃಷ್ಣಪ್ಪನಾಯಕ ಸದಸ್ಯರು
ಅಬಕಾರಿ ಉಪ ಆಯುಕ್ತರು,
(ಜಾರಿ ಮತ್ತು ತನಿಖೆ), ಗುಲ್ಬರ್ಗಾ

3) ಶ್ರೀ ಕಾಂತಪ್ಪ ಸದಸ್ಯರು
ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಕಛೇರಿ,
ಗುಲ್ಬರ್ಗಾ.

4) ಶ್ರೀ ಪ್ರೆಸ್ಸಾ ಸದಸ್ಯರು
ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು
ಅಲ್ಪಸಂಖ್ಯಾತ ಕಛೇರಿ, ಗುಲ್ಬರ್ಗಾ.

ಈ ರೀತಿ ಆಯ್ಕೆಯಾದ 50 ಜನ ಅಭ್ಯರ್ಥಿಗಳ ಮತ್ತು ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾದ 5 ಜನ ಅಭ್ಯರ್ಥಿಗಳ ವರ್ಗೀಕರಣ ಕೆಳಕಾಣಿಸಿದಂತೆ ಇರುತ್ತದೆ.

ವರ್ಗ	ಮೊದಲ ಪಟ್ಟಿಯಲ್ಲಿ ಆಯ್ಕೆಯಾದವರ ಸಂಖ್ಯೆ	ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾದವರ ಸಂಖ್ಯೆ
ಪರಿಶಿಷ್ಟ ಜಾತಿ	12	1
ಪರಿಶಿಷ್ಟ ಪಂಗಡ	4	1
'ಎ' ವರ್ಗ	2	1
'ಬಿ' ವರ್ಗ	5	1
'ಸಿ' ವರ್ಗ	5	–
'ಡಿ' ವರ್ಗ	4	–
'ಇ' ವರ್ಗ	2	–
ಸಾಮಾನ್ಯ ಅರ್ಹತೆ	12	1
ಮಾಜಿ ಸೈನಿಕರು	4	–
ಒಟ್ಟು	50	5

ಜಾರಿ ಮತ್ತು ತನಿಖಾ ವಿಭಾಗದ ಅಬಕಾರಿ ಜಿಲ್ಲಾಧಿಕಾರಿ, ಗುಲ್ಬರ್ಗಾ ಇವರು ಈ ನಿಟ್ಟಿನಲ್ಲಿ ಮಾನ್ಯ ಶಾಸಕರುಗಳು ಮಾಡಿದ ಆರೋಪಗಳು ಸರಿಯಾದವುಗಳು ಅಲ್ಲ ಎಂದು ತಿಳಿಸಿರುತ್ತಾರೆ. ಆದಾಗ್ಯೂ, ಈ ಬಗ್ಗೆ ವಿವರವಾದ ತನಿಖೆಯನ್ನು ಮಾಡಿ ಸತ್ಯ ಶೋಧನೆಯನ್ನು ಮಾಡಲಾಗುವುದು.

(6) ಹಾಸನದಲ್ಲಿ ಸಾರಿಗೆ ಸಂಸ್ಥೆಯ ಚಾಲಕ ತರಬೇತಿ ಕೇಂದ್ರದ ಕಟ್ಟಡ.

ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು):- ಮಾನ್ಯ ಉಪಾಧ್ಯಕ್ಷರೇ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಹಾಸನದಲ್ಲಿ ಚಾಲಕ ತರಬೇತಿ ಕೇಂದ್ರವನ್ನು ತೆರೆಯಲು ಉದ್ದೇಶಿಸಿದ್ದು, ಅದಕ್ಕೆ ಸಂಬಂಧಿಸಿದ ಚಾಲಕ ತರಬೇತಿ ಕೇಂದ್ರದ ಕಟ್ಟಡವನ್ನು ಕಟ್ಟುವ ಕಾರ್ಯದ

ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೆ? ಬಂದಿದ್ದರೆ ಎಂದಿನಿಂದ ಕಟ್ಟಡದ ಕೆಲಸವನ್ನು ಮತ್ತು ಚಾಲಕ ತರಬೇತಿ ಕೇಂದ್ರವನ್ನು ಪ್ರಾರಂಭಿಸಲಾಗುವುದು ಎಂದು ತಿಳಿಯಬಯಸುತ್ತೇನೆ.

ಶ್ರೀ ಹಾರ್ನಹಳ್ಳಿ ರಾಮಸ್ವಾಮೀ (ಸಂಸದೀಯ ವ್ಯವಹಾರ ಹಾಗೂ ಕಾನೂನು ಮಂತ್ರಿ):- ಮಾನ್ಯ ಉಪಾಧ್ಯಕ್ಷಿಣಿಯವರೇ, ಮಾನ್ಯ ಸಾರಿಗೆ ಮಂತ್ರಿಗಳ ಪರವಾಗಿ ಈ ಹೇಳಿಕೆಯನ್ನು ಓದುತ್ತೇನೆ.

ಹಾಸನದಲ್ಲಿ ಪ್ರಾದೇಶಿಕ ತರಬೇತಿ ಕೇಂದ್ರವನ್ನು ಸುಮಾರು 85.00 ಲಕ್ಷ ರೂ.ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಿದ್ದು ಈ ಕೆಲಸಕ್ಕಾಗಿ ಟೆಂಡರನ್ನು ಕರೆಯಲಾಗಿದೆ. ಸಂಸ್ಥೆಯು ಎದುರಿಸುತ್ತಿರುವ ಆರ್ಥಿಕ ಪರಿಸ್ಥಿತಿಯಿಂದಾಗಿ ಟೆಂಡರ್‌ಗಳನ್ನು ತೀರ್ಮಾನಿಸಲಾಗಿರುವುದಿಲ್ಲ. ಸಂಸ್ಥೆಯ ಆರ್ಥಿಕ ಪರಿಸ್ಥಿತಿ ಉತ್ತಮಗೊಂಡ ನಂತರ ಟೆಂಡರ್‌ಗಳನ್ನು ತೀರ್ಮಾನಿಸಿ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು. ಹಾಲಿ ಹಾಸನ ಬಸ್ ನಿಲ್ದಾಣದಲ್ಲಿ ಲಭ್ಯವಿರುವ ಸ್ಥಳದಲ್ಲಿ ತರಬೇತಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

4. ಶಾಸನ ರಚನಾ ಕಾರ್ಯಕಲಾಪಗಳು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ 1993

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು):- ಮಾನ್ಯ ಉಪಾಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕ 1993ನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ, ''ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ 1993ನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ:- ಮಾನ್ಯ ಅಧ್ಯಕ್ಷರೇ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ 1993ನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

ಅ) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು:

1993ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ಸಚಿವರು):- ಮಾನ್ಯ ಅಧ್ಯಕ್ಷರೇ, 1993ನೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

† ಶ್ರೀ ಹಾರ್ನಹಳ್ಳಿ ರಾಮಸ್ವಾಮಿ (ಕಾನೂನು ಹಾಗೂ ಸಂಸದೀಯ ಸಚಿವರು):- ಮಾನ್ಯ ಅಧ್ಯಕ್ಷರೇ, ಬೆಂಗಳೂರು ನಗರದಲ್ಲಿ ಅಭಿವೃದ್ಧಿಯಾಗಿರತಕ್ಕ ಅನೇಕ ಪ್ರದೇಶಗಳಲ್ಲಿ,